# ರಾ.ಸೇ.ಯೋ ದಿನಾಚರಣೆ
# "ದೇಶದ ಏಕತೆ ಮತ್ತು ಸಮಗ್ರತೆಗೆ ಎನ್.ಎಸ್.ಎಸ್ ಸಹಕಾರಿ"

24th-Sep-2018




ಸಮಾನತೆ, ಐಕ್ಯತೆ, ಭ್ರಾತೃತ್ವ ಮನೋಭಾವನೆಯಿಂದ ದೇಶದ ಏಕತೆ ಮತ್ತು ಸಮಗ್ರತೆಯನ್ನು ರಕ್ಷಿಸುವ ಗುರಿಯನ್ನು ರಾಷ್ಟ್ರೀಯ ಸೇವಾ ಯೋಜನೆ ಹೊಂದಿದೆ ಎಂದು ನಿವೃತ್ತ ಪ್ರಾಧ್ಯಾಪಕರು ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಅಧಿಕಾರಿ ಪ್ರೊ. ಚಿಕ್ಕಕೆಂಪೇಗೌಡ ಅಭಿಪ್ರಾಯ ಪಟ್ಟರು.

ನಗರದ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಇಂದು ಏರ್ಪಡಿಸಿದ್ದ ರಾಷ್ಟ್ರೀಯ ಸೇವಾ ಯೋಜನೆಯ ೫೦ನೇ ವಾರ್ಷಿಕೋತ್ಸವದ ಅಂಗವಾಗಿ ಏರ್ಪಡಿಸಲಾಗಿದ್ದ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಇದೇ ವೇಳೆ ರಾಷ್ಟ್ರಪಿತ ಮಹಾತ್ಮಗಾಂಧಿಯವರ ಜನ್ಮ ಶತಮಾನೋತ್ಸವ ವರ್ಷದಂದು ರಾ.ಸೇ.ಯೋ ೫೦ನೇ ವಾರ್ಷಿಕೋತ್ಸವ ಆಚರಿಸುತ್ತಿರುವುದು ಹೆಚ್ಚು ಸಮಂಜಸವಾದುದು ಸೆಪ್ಟೆಂಬರ್ ೨೪, ೧೯೬೯ರಂದು ಈ ಸಂಸ್ಥೆ ಜನ್ಮ ತಾಳಿತು. ಇಂದು ದೇಶಾದ್ಯಂತ ೪೦ ಲಕ್ಷಕ್ಕೂ ಹೆಚ್ಚು ಅಧಿಕ ವಿದ್ಯಾರ್ಥಿಗಳು ಎನ್.ಎಸ್.ಎಸ್.ಗೆ ನೊಂದಣಿ ಮಾಡಿಕೊಂಡಿದ್ದಾರೆ. ಗಾಂಧೀಜಿಯವರ ಆಶಯ ಯುವಜನರನ್ನು ರಾಷ್ಟ್ರ ನಿರ್ಮಾಣಕ್ಕೆ ಬಳಸಿಕೊಳ್ಳುವುದಾಗಿತ್ತು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್.ಮರೀಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರೆ, ರಾ.ಸೇ.ಯೋ ಸಂಯಾಜನಾಧಿಕಾರಿಗಳಾದ ಡಾ. ರಘು.ಬಿ.ಟಿ ಅವರು ಸ್ವಾಗತಿಸಿದರೆ, ಕಾಲೇಜಿನ ೪೦ನೇ ವರ್ಷದ ಸಂಭ್ರಮಾಚರಣೆ ಸಮಿತಿಯ ಸಂಯೋಜನಾಧಿಕಾರಿಗಳಾದ ಪ್ರೊ.ಹೆಚ್.ಜೆ.ಚಂದ್ರಶೇಖರ್, ಬೋಧಕರು, ಬೋಧಕೇತರರು ಹಾಗೂ ರಾ.ಸೇ.ಯೋ ಸ್ವಯಂ ಸೇವಕರು ಭಾಗವಹಿಸಿದ್ದರು. ವಿದ್ಯಾರ್ಥಿ ಶಿವರಾಜ್ ಕಾರ್ಯಕ್ರಮವನ್ನು ನಿರೂಪಿಸಿದರೆ ಆನಂದ್ ವಂದಿಸಿದರು.


ರಾಷ್ಟ್ರೀಯ ಸೇವಾ ಯೋಜನೆ















Vidyavardhaka First Grade College, Mysuru – Events, Special Talks, Seminars and Activities page









